**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.490/2023**

| | | |
|---|---|---|
| ಸಾಕ್ಷಿದಾರರ ಹೆಸರು | ಃ ಸುನಿಲ್ ಆರ್. | ಫ್ರಾ.ಸಾ -5 |
| ತಂದೆಯ ಹೆಸರು | ಃ ರಾಮಚಂದ್ರ | ಚಾಸಾ-6 |
| ವಯಸ್ಸು | ಃ 48 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | ಃ ವಾಟರ್ ಮ್ಯಾನ್ | ದಿನಾಂಕಃ29.04.2024 |
| ವಾಸಸ್ಥಳ | ಃ ಕಳಸ | |

**ಃಮುಖ್ಯ ವಿಚಾರಣೆ ಪ್ರಾಜ್ಞ್ಯಾ.ಸ.ಸ.ಅ. ರವರಿಂದಃ**

ನ್ಯಾಯಾಲಯದ ಮುಂದಿರುವ ಆರೋಪಿ ನನಗಿಲ್ಲ. ಚಾಸಾ-1, 2 ಮತ್ತು 5 ರವರ ಪರಿಚಯ ನನಗಿದೆ.

ಸಾಕ್ಷಿಯು ದಿ.27.11.2022 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿ, ಎರಡು ಭಾವಚಿತ್ರಗಳಲ್ಲಿ ತಾವು ಇರುವುದಾಗಿ ಗುರುತಿಸುತ್ತಾರೆ. ಮಹಜರ್ ನ್ನು ನಿಪಿ-12, ಸಾಕ್ಷಿಯ ಸಹಿಯನ್ನು ನಿಪಿ-12(ಎ), ಭಾವಚಿತ್ರಗಳನ್ನು ನಿಪಿ-13 ಮತ್ತು 14 ಎಂದು ಗುರುತಿಸಲಾಯಿತು.

ಕಳೆದ ಒಂದು ವರ್ಷದ ಹಿಂದೆ ನಾನು ಕಳಸ ಟೌನ್ ನಲ್ಲಿ ಇದ್ದಾಗ ಕಳಸ ಪೋಲಿಸರು ನನ್ನನ್ನು ಠಾಣೆಗೆ ಕರೆಸಿ ಸಹಿ ಮತ್ತು ಭಾವಚಿತ್ರಗಳನ್ನು ತೆಗೆದಿದ್ದು ಯಾವ ವಿಚಾರಕ್ಕೆ ಎಂದು ನನಗೆ ಗೊತ್ತಿಲ್ಲ. ಆ ದಿನ ಆರೋಪಿ ಠಾಣೆಯಲ್ಲಿ ಇದ್ದರ ಎಂದು ನನಗೆ ಗೊತ್ತಿಲ್ಲ. ಆ ದಿನ ಪೋಲಿಸರು ನನ್ನ ಸಮಕ್ಷಮ ಯಾವುದೇ ಶರ್ಟ್ ನ್ನು ವಶಕ್ಕೆ ಪಡೆದುಕೊಳ್ಳಲಿಲ್ಲ. ಈಗ ನೋಡುತ್ತಿರುವ ಶರ್ಟ್ ನ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ.ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ದಿ.27.11.2022 ರಂದು ರಾ.10.00 ರಿಂದ 10.30 ರ ಸಮಯಕ್ಕೆ ಕಸಳ ಪೋಲಿಸರು ಪೋಲಿಸ್ ಠಾಣೆಯಲ್ಲಿ ನನ್ನ ಹಾಗೂ ಚಾಸಾ-5 ರವರ ಸಮಕ್ಷಮದಲ್ಲಿ ಆರೋಪಿಯು ತಾನು ಚಾಸಾ-2 ರವರೊಂದಿಗೆ ಜಗಳ ಮಾಡಿದ ಸಮಯಕ್ಕೆ ಧರಿಸಿದ್ದ ಶರ್ಟ್ ನ್ನು ಹಾಜರುಪಡಿಸಿರುವ ವಿಚಾರವಾಗಿ ನಿಪಿ-12 ನ್ನು ಬರೆದು ನಿಪಿ-13 ಮತ್ತು 14 ರ ಫೋಟೋಗಳನ್ನು ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಈಗ ನಾನು ನೋಡುತ್ತಿರುವ ಶರ್ಟ್ೀ ಆ ದಿನ ಆರೋಪಿಯು ಹಾಜರುಪಡಿಸಿದ್ದ ಹಾಗೂ ಪೋಲಿಸರು ವಶಕ್ಕೆ ಪಡೆದ ಶರ್ಟ್ ಆಗಿರುತ್ತದೆ ಎಂದರೆ ಸರಿಯಲ್ಲ.

ನಿಪಿ-12 ರಿಂದ 14 ಮತ್ತು ಪ್ರಕರಣದ ಸಂಪೂರ್ಣ ವಿಚಾರ ನನಗೆ ಗೊತ್ತಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

Sd/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.490/2023**

| | | |
|---|---|---|
| ಸಾಕ್ಷಿದಾರರ ಹೆಸರು | ಃ ರಾಜು | ಪ್ರಾ.ಸಾ -4 |
| ತಂದೆಯ ಹೆಸರು | ಃ ಮಂಜು | ಚಾಸಾ-4 |
| ವಯಸ್ಸು | ಃ 33 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | ಃ ಕೂಲಿ | ದಿನಾಂಕಃ29.04.2024 |
| ವಾಸಸ್ಥಳ | ಃ ಮರಸಣಿಗೆ | |

**ಃಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದಃ**

ನ್ಯಾಯಾಲಯದ ಮುಂದಿರುವ ಆರೋಪಿ ನನಗೆ ಪರಿಚಯ. ಅವರು ನಾನು ಕೆಲಸ ಮಾಡುವ ಎಸ್ಟೇಟ್ ನಲ್ಲಿ ಕೆಲಸ ಮಾಡುತ್ತಾರೆ. ಚಾಸಾ-1 ರಿಂದ 3 ರವರ ಪರಿಚಯ ನನಗಿದೆ.

ಸಾಕ್ಷಿಯು ನಿಪಿ-2 ಮತ್ತು 7 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿ, ನಿಪಿ-3, 8 ಮತ್ತು 9 ರ ಭಾವಚಿತ್ರದಲ್ಲಿ ತಾವು ಇರುವುದಾಗಿ ಗುರುತಿಸುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಮತ್ತು 7(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಎಂ.ಒ.3 ರ ಮೇಲಿನ ತಮ್ಮ ಸಹಿಯನ್ನು ಗುರುತಿಸಿದ್ದು ಅದನ್ನು ಎಂ.ಒ.3(ಎ) ಎಂದು ಗುರುತಿಸಲಾಯಿತು.

ಕಳೆದ ಒಂದು ವರ್ಷದ ಹಿಂದೆ ನಾನು ಎಸ್ಟೇಟ್ ನಲ್ಲಿ ಕೆಲಸ ಮಾಡುವಾಗ ಪೋಲಿಸರು ನನ್ನ ಸಹಿಯನ್ನು ಪಡೆದು ಫೋಟೊ ತೆಗೆದಿರುತ್ತಾರೆ. ಯಾವ ವಿಚಾರಕ್ಕೆ ಸಹಿ ಪಡೆದು ಫೋಟೋ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನಿಪಿ-2 ಮತ್ತು 7 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತಿಲ್ಲ ಹಾಗೂ ಆ ಬಗ್ಗೆ ಪೋಲಿಸರು ಏನನ್ನು ತಿಳಿಸಿಲ್ಲ. ನಾನು ಸಹಿ ಮಾಡುವ ಕಾಲಕ್ಕೆ ಚಾಸಾ-1 ರವರು ಏನನ್ನು ಹೇಳಿಲ್ಲ. ಪೋಲಿಸರು ನನ್ನ ಸಮಕ್ಷಮ ಏನನ್ನು ಅಮಾನತ್ತುಪಡಿಸಿಕೊಂಡಿಲ್ಲ. ಎಂ.ಒ.3 ನ್ನು ನಾನು ಈ ಹಿಂದೆ ಎಲ್ಲೂ ನೋಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ದಿ.28.11.2022 ರಂದು ಕಳಸಾದ ಮರಸಣಿಗೆ ಗ್ರಾಮದ ಮಹೇಂದ್ರಗೌಡರವರ ಸ.ನಂ.230 ರ ಜಾಗದಲ್ಲಿ ಬೆ.10.00 ರಿಂದ 11.30 ರ ಸಮಯದಲ್ಲಿ ನಿಪಿ-7 ಕ್ಕೆ ಸಹಿ ಮಾಡಿದ್ದು ಆ ಸ್ಥಳದಲ್ಲಿಯೇ ನಿಪಿ-8 ರಿಂದ 11 ರ ಭಾವಚಿತ್ರಗಳನ್ನು ತೆಗೆಯಲಾಗಿದೆ ಎಂದರೆ ಸರಿಯಲ್ಲ. ಆ ದಿನ ಆರೋಪಿಯು ದಿ.27.11.2022 ರಂದು ಸ.5.00 ಗಂಟೆ ಸಮಯಕ್ಕೆ ಚಾಸಾ-2 ರವರಿಗೆ ಹಲ್ಲೆ ಮಾಡಿದ ಜಾಗ ಇದೆ ಎಂದು ಹಾಗೂ ಒಂದು ಕತ್ತಿಯನ್ನು ತೋರಿಸಿ ಅದರಿಂದಲೇ ಚಾಸಾ-2 ರವರಿಗೆ ಹಲ್ಲೆ ಮಾಡಿರುವುದಾಗಿ

ಪೋಲಿಸರ ಮುಂದೆ ಹಾಜರುಪಡಿಸಿದರು ಎಂದರೆ ಸರಿಯಲ್ಲ. ಆ ದಿನ ಆರೋಪಿ ನನ್ನ ಸಮಕ್ಷಮ ಹಾಜರುಪಡಿಸಿದ ಕತ್ತಿಯೇ ಎಂ.ಒ.3 ಎಂದರೆ ಸರಿಯಲ್ಲ.

ದಿ.08.12.2022 ರಂದು ಚಾಸಾ-1 ರವರು ತನ್ನ ಗಂಡ ಚಾಸಾ-2 ರವರಿಗೆ ಹಲ್ಲೆ ಮಾಡಿದ ಸ್ಥಳ ಎಂದು ಸ್ಥಳ ತೋರಿಸಿದ ಮೇರೆಗೆ ಅಲ್ಲಿ ಬೆ.11.00 ರಿಂದ 11.30 ರವರಗೆ ನಿಪಿ-2 ರಂತೆ ಮಹಜರ್ ಬರೆದಿದ್ದು ಆ ಸಮಯದಲ್ಲಿ ನಿಪಿ-3 ರ ಭಾವಚಿತ್ರ ತೆಗೆಯಲಾಗಿದೆ ಎಂದರೆ ಸರಿಯಲ್ಲ. ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ನನಗಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.945/2022**

| | | |
|---|---|---|
| ಸಾಕ್ಷಿದಾರರ ಹೆಸರು | ಃ ಕವಿತಾ | ಪ್ರಾಸಾ -3 |
| ಗಂಡನ ಹೆಸರು | ಃ ಸುಂದರೇಶ್ | ಚಾಸಾ-4 |
| ವಯಸ್ಸು | ಃ 40 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | ಃ ಗೃಹಿಣಿ | ದಿನಾಂಕಃ25.03.2023 |
| ವಾಸಸ್ಥಳ | ಃ ಮಾಗೋಡು, ಚಿಕ್ಕಮಗಳೂರು. | |

**ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದಃ**

ನ್ಯಾಯಾಲಯದ ಮುಂದಿರುವ ಆರೋಪಿ ನನ್ನ ಅಳಿಯ. ಚಾಸಾ-1 ನನ್ನ ಮಗಳು. ಚಾಸಾ-3 ನನ್ನ ಪತಿ. ಚಾಸಾ-2 ನಮ್ಮ ಊರುಮನೆಯವರು.

ಚಾಸಾ-1 ಮತ್ತು ಆರೋಪಿ ಈಗ ಅನ್ಯೂನ್ಯವಾಗಿದ್ದಾರೆ. ನಾನು ಯಾವುದೇ ಘಟನೆಯ ಪ್ರತ್ಯಕ್ಷ ದರ್ಶಿಯಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು ಮಾನ್ಯ ಸ.ಸ.ಅ. ರವರಿಂದ**

ಈಗ ಓದಿ ಹೇಳಿದಂತೆ ದಿ.04.05.2022 ರಂದು ಪೋಲಿಸರ ಮುಂದೆ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-14 ಎಂದು ಗುರುತಿಸಲಾಯಿತು.

ಆರೋಪಿಯು ನನ್ನ ಅಳಿಯನಾಗಿದ್ದು ಅವರಿಗೆ ಶಿಕ್ಷೆಯಾಗುತ್ತದೆ ಎಂದು ನಾನು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಆರೋಪಿಯೊಂದಿಗೆ ರಾಜೀ ಮಾಡಿಕೊಂಡಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.945/2022**

| | | |
|---|---|---|
| ಸಾಕ್ಷಿದಾರರ ಹೆಸರು | ಃ ಸುಂದರೇಶ್ ಎಂ.ಪಿ. | ಪ್ರಾ.ಸಾ -2 |
| ತಂದೆಯ ಹೆಸರು | ಃ ಪುಟ್ಟೇಗೌಡ | ಚಾಸಾ-3 |
| ವಯಸ್ಸು | ಃ 52 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | ಃ ವ್ಯವಸಾಯ | ದಿನಾಂಕಃ14.03.2023 |
| ವಾಸಸ್ಥಳ | ಃ ಮಾಗೋಡು, ಚಿಕ್ಕಮಗಳೂರು. | |

**ಮುಖ್ಯ ವಿಚಾರಣೆ ಪ್ರಾಜ್ಞಾ ಸ.ಸ.ಅ. ರವರಿಂದಃ**

ನ್ಯಾಯಾಲಯದ ಮುಂದಿರುವ ಆರೋಪಿ ನನ್ನ ಅಳಿಯ. ಚಾಸಾ-1 ನನ್ನ ಮಗಳು. ಚಾಸಾ-4 ನನ್ನ ಪತ್ನಿ.

ಚಾಸಾ-1 ಮತ್ತು ಆರೋಪಿ ಈಗ ಅನ್ಯೂನ್ಯವಾಗಿದ್ದಾರೆ. ನಾನು ಯಾವುದೇ ಘಟನೆಯ ಪ್ರತ್ಯಕ್ಷ ದರ್ಶಿಯಲ್ಲ.

ಸಾಕ್ಷಿಯು ನಿಪಿ-6 ಮತ್ತು 7 ನ್ನು ತೋರಿಸಲಾಗಿ ಅದರಲ್ಲಿ ತಾವು ಇರುವುದಾಗಿ ನುಡಿಯುತ್ತಾರೆ. ಸದರಿ ಫೋಟೋಗಳನ್ನು ಯಾವ ವಿಚಾರಕ್ಕೆ ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು ಮಾನ್ಯ ಸ.ಸ.ಅ. ರವರಿಂದ**

ಈಗ ಓದಿ ಹೇಳಿದಂತೆ ದಿ.04.05.2022 ರಂದು ಪೋಲಿಸರ ಮುಂದೆ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-13 ಎಂದು ಗುರುತಿಸಲಾಯಿತು.

ಆರೋಪಿಯು ನನ್ನ ಅಳಿಯನಾಗಿದ್ದು ಅವರಿಗೆ ಶಿಕ್ಷೆಯಾಗುತ್ತದೆ ಎಂದು ನಾನು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಆರೋಪಿಯೊಂದಿಗೆ ರಾಜೀ ಮಾಡಿಕೊಂಡಿದ್ದೇನೆ ಎಂದರೆ

ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.</u>

<u>ಮರು ವಿಚಾರಣೆ ಇಲ್ಲ</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಾಕ್ಷಿ ಸಹಿಃ
ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ</u>**
**<u>ಸಿ.ಸಿ.945/2022</u>**

| | | |
|---|---|---|
| ಸಾಕ್ಷಿದಾರರ ಹೆಸರು | ಃ ರಂಜಿನಿ ಎಂ.ಎಸ್. | ಫ್ರಾಸಾ -1 |
| ಗಂಡನ ಹೆಸರು | ಃ ಕೌಶಿಕ್ ಎ.ಎಂ. | ಚಾಸಾ-1 |
| ವಯಸ್ಸು | ಃ 29 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | ಃ ವ್ಯವಸಾಯ | ದಿನಾಂಕಃ14.03.2023 |
| ವಾಸಸ್ಥಳ | ಃ ಅತ್ತಿಗೆರೆ | |

<u>ಮುಖ್ಯ ವಿಚಾರಣೆ ಪ್ರಾಡ್ಜ್ಞಾಸ.ಸ.ಅ. ರವರಿಂದಃ</u>

ನ್ಯಾಯಾಲಯದ ಮುಂದಿರುವ ಆರೋಪಿ ನನ್ನ ಗಂಡ. ಚಾಸಾ-3 ನನ್ನ ತಂದೆ. ಚಾಸಾ-4 ನನ್ನ ತಾಯಿ.

ಸಾಕ್ಷಿಗೆ ದಿ.03.05.2022 ರ ದೂರು, ಮಹಜರ್ ನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿ ಇರುವುದಾಗಿ ನುಡಿಯುತ್ತಾರೆ. ಅವುಗಳನ್ನು ನಿಪಿ-1 ಮತ್ತು ನಿಪಿ-2, ಅದರಲ್ಲಿನ ಸಾಕ್ಷಿಯ ಸಹಿಗಳನ್ನು ನಿಪಿ-1(ಎ), 2(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಎರಡು ಫೋಟೋಗಳನ್ನು ತೋರಿಸಲಾಗಿ ಅರದಲ್ಲಿ ತಾವು ಇರುವುದಾಗಿ ನುಡಿಯುತ್ತಾರೆ. ಅವುಗಳನ್ನು ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು. ಸಾಕ್ಷಿಗೆ ಅಮಾನತ್ತು ಮಹಜರ್ ತೋರಿಸಲಾಗಿ ಅದರಲ್ಲಿ ತಮ್ಮ ಸಹಿ ಇರುವುದಾಗಿ ನುಡಿಯುತ್ತಾರೆ. ಅದನ್ನು ನಿಪಿ-5, ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು, ಎರಡು ಫೋಟೋಗಳನ್ನು ನಿಪಿ-6 ಮತ್ತು 7 ಎಂದು ಗುರುತಿಸಲಾಯಿತು. ಸಾಕ್ಷಿಯು ತಮ್ಮ ಮದುವೆಯ ಕಾಲಕ್ಕೆ ತೆಗೆದ 4 ಫೋಟೋಗಳು ಹಾಗೂ ಮದುವೆಯ ಆಮಂತ್ರಣವನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-8 ರಿಂದ 12 ಎಂದು ಗುರುತಿಸಲಾಯಿತು.

ದಿ.16.05.2013 ರಂದು ನನ್ನ ಹಾಗೂ ಆರೋಪಿಗೆ ಮದುವೆಯಾಗಿದ್ದು ನಮಗೆ ಒಂದು ಹೆಣ್ಣು

ಮಗು ಇದೆ. ನಮ್ಮ ನಡುವೆ ಸಣ್ಣಪುಟ್ಟ ಜಗಳವಾಡುತ್ತಿದ್ದು ನಾವು ಈಗ ಹೊಟ್ಟೆಗೆ ಅನ್ಯೂನ್ಯವಾಗಿ ಸಂಸಾರ ನಡೆಸುತ್ತಿದ್ದೇವೆ.

ಪೋಲಿಸರ ಕೋರಿಕೆಯ ಮೇರೆಗೆ ಕೆಲವು ದಾಖಲೆಗಳಿಗೆ ನಾನು ಸಹಿ ಮಾಡಿದ್ದು ಅವುಗಳಲ್ಲಿ ಏನು ವಿಚಾರ ಬರೆದಿದೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು ಮಾನ್ಯ ಸ.ಸ.ಅ. ರವರಿಂದ**

ದಿ.03.05.2022 ರಂದು ಬೆ.7.00 ಗಂಟೆ ಸಮಯದಲ್ಲಿ ಅತ್ತಿಗೆರೆ ಗ್ರಾಮದ ನಮ್ಮ ಮನೆಯಲ್ಲಿ ಆರೋಪಿಯು ನನ್ನೊಂದಿಗೆ ಗಲಾಟೆ ಮಾಡಿ ಕತ್ತಿಗೆ ಪರಚಿ ಕೈಯಿಂದ ನನ್ನ ಬಲಗೈ ಗೆ ಬೆನ್ನಿಗೆ ಹೊಡೆದು ನೋವುಂಟು ಮಾಡಿ ಅವಾಚ್ಯ ಶಬ್ದಗಳಿಂದ ಬೈದು, ದೈಹಿಕ ಹಿಂಸೆ ನೀಡಿದ ಬಗ್ಗೆ ನಿಪಿ-1 ನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಮರುದಿನ ಪೋಲಿಸರು ಸ್ಥಳಕ್ಕೆ ಬಂದಿದ್ದು ಆಗ ನಿಪಿ-2 ಕ್ಕೆ ಸಹಿ ಮಾಡಿರುತ್ತೇನೆ. ನಿಪಿ-3 ಮತ್ತು 4 ನ್ನು ತೆಗೆಯಲಾಗಿದೆ ಎಂದರೆ ಸರಿಯಲ್ಲ. ದಿ.12.05.2022 ರಂದು ನಾನು ಪೋಲಿಸ್ ಠಾಣೆಗೆ ಬಂದು ನಿಪಿ-9 ರಿಂದ 13 ನ್ನು ನೀಡಿದ್ದು ಆ ಸಮಯಕ್ಕೆನಿಪಿ-5 ರ ಮಹಜರ್ ಬರೆದಿದ್ದು ಅದಕ್ಕೆ ನಾನು ಸಹಿ ಮಾಡಿರುತ್ತೇನೆ. ನಿಪಿ-5 ನ್ನು ಬರೆಯುವ ಸಮಯಕ್ಕೆ ನಿಪಿ-6 ಮತ್ತು 7 ನ್ನು ತೆಗೆಯಲಾಗಿದೆ ಎಂದರೆ ಸರಿಯಲ್ಲ.

ಆರೋಪಿಯು ನನ್ನ ಪತಿಯಾಗಿದ್ದು ಅವರಿಗೆ ಶಿಕ್ಷೆಯಾಗುತ್ತದೆ ಎಂದು ನಾನು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಆರೋಪಿಯೊಂದಿಗೆ ರಾಜೀ ಮಾಡಿಕೊಂಡಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಾಕ್ಷಿ ಸಹಿಃ

ನ್ಯಾಯಾಧೀಶರು

ಹೆಚ್ಚುವರಿ ಸಿವಿಲ್

ಮತ್ತು ಪ್ರದನ್ಯಾದಂ., ಮೂಡಿಗೆರೆ.